# ಪ್ರವಾದಿ ನಹೂಮನ ಗ್ರಂಥ

## ಮುನ್ನುಡಿ

ಇಸ್ರಯೇಲಿನ ಪುರಾತನ ಹಾಗೂ ಕ್ರೂರ ಶತ್ರುಗಳಲ್ಲಿ ಅಸ್ಸೀರಿಯ ರಾಷ್ಟ್ರವು ಒಂದು. ಇದರ ರಾಜಧಾನಿ ನಿನೆವೆ ನಗರ. ಈ ನಗರ ಕ್ರಿ. ಪೂ. ಏಳನೇ ಶತಮಾನದ ಅಂತ್ಯದಲ್ಲಿ ನೆಲಸಮವಾಯಿತು. ಇದರ ನಿವಾಸಿಗಳು ನಿರ್ದಯಿಗಳಾಗಿಯೂ ಅಹಂಕಾರಿಗಳಾಗಿಯೂ ಇದ್ದುದರಿಂದ ದೇವರ ದಂಡನೆಗೆ ಗುರಿಯಾದರು. ಈ ದುರಂತ ಸಂಭವಿಸುವುದಕ್ಕೆ ಮುಂಚಿತವಾಗಿ ಪ್ರವಾದಿ ನಹೂಮನು ಅದನ್ನು ಕುರಿತು ಒಂದು ಪುಟ್ಟಕಾವ್ಯವನ್ನು ಗದ್ಯ ಹಾಗೂ ಪದ್ಯದ ರೂಪದಲ್ಲಿ ರಚಿಸಿದ್ದಾನೆ.

## ಪರಿವಿಡಿ


| | | | | |
|---|---|---|---|---|
| ನಿನೆವೆಯ ಮೇಲೆ ದೇವರ ತೀರ್ಪು | – | 1.1 | – | 1.15 |
| ನಿನೆವೆಯ ವಿನಾಶ | – | 2.1 | – | 3.19 |


### ನಿನೆವೆಯ ಮೇಲೆ ಪ್ರಭುವಿನ ಶಾಪ

**1** ನಿನೆವೆಯನ್ನು ಕುರಿತ ದೈವೋಕ್ತಿ. ಎಲ್ಕೋಷ್
ಊರಿನ ನಹೂಮ ಪ್ರವಾದಿಗೆ ಆದ
ದೈವದರ್ಶನವಿದು:
2 ಸರ್ವೇಶ್ವರ ಸ್ವಗೌರವವನು ಕಾಪಾಡಿಕೊಳ್ಳುವ
ದೇವರು
ಮುಯ್ಯಿತೀರಿಸುವ, ಹೌದು, ಕಡುಕೋಪದಿಂದ
ಮುಯ್ಯಿತೀರಿಸುವ ದೇವರು.
ಸರ್ವೇಶ್ವರ ಮುಯ್ಯಿತೀರಿಸುತ್ತಾರೆ ತನ್ನ
ವಿರೋಧಿಗಳಿಗೆ
ದೀರ್ಘರೋಷವಿಡುತ್ತಾರೆ, ತಮ್ಮ ಶತ್ರುಗಳ
ಮೇಲೆ.
3 ಸರ್ವೇಶ್ವರ ಶಾಂತಿಸ್ವರೂಪಿ; ಆದರೆ
ಆತನ ಶಕ್ತಿ ಅಪಾರ,
ಅಪರಾಧಿಗಳನ್ನು ಆಕಶಿಕ್ಷಿಸದೆ ಬಿಡ;
ಗಾಳಿಬಿರುಗಾಳಿಗಳ ನಡುವೆ ಆತನ ಹಾದಿ;
ಮೋಡಗಳು ಆತನ ನಡೆಯಿಂದೇಳುವ ಧೂಳಿ.
4 ಆತನ ಗದರಿಕೆಯೊಂದಕೆ ಬತ್ತಿಹೋಗುತ್ತದೆ
ಸಮುದ್ರ;
ನಂದಿಹೋಗುತ್ತವೆ ನದಿಸರೋವರ.
ಕಂದುತ್ತವೆ ಕಾರ್ಮೆಲ್ ಗುಡ್ಡಗಳು
ಬಾಡುತ್ತವೆ ಬಾಷಾನಿನ ಹೊಲಗಳು
ಮುದುಡುತ್ತವೆ ಲೆಬನೋನಿನ ಚಿಗುರುಗಳು.
5 ಆತನೆದುರು ಅದರುತ್ತವೆ ಬೆಟ್ಟಗಳು

ಕರಗುತ್ತವೆ ಗುಡ್ಡಗಳು.
ಆತನ ದರ್ಶನಕೆ ಕಂಪಿಸುತ್ತದೆ ಭೂಗೋಳವು
ತಲ್ಲಣಿಸುತ್ತದೆ ಲೋಕ
ಲೋಕನಿವಾಸಿಗಳೆಲ್ಲವು.
6 ಯಾರು ತಡೆದಾರು ಆತನ ಸಿಟ್ಟಿಗೆ?
ಯಾರು ನಿಂತಾರು ಆತನ ರೋಷಾಗ್ನಿಗೆ?
ಆತನ ರೌದ್ರ ಜ್ವಾಲಾಪ್ರವಾಹದಂತೆ
ಬಂಡೆಗಳು ಪುಡಿಪುಡಿ ಆತನ ಮುಂದೆ.
7 ಒಳ್ಳೆಯವನು ಸರ್ವೇಶ್ವರ
ಸಂಕಟದಲಿ ಆಶ್ರಯದುರ್ಗ
ಮೊರೆಹೊಕ್ಕವರನು ಚೆನ್ನಾಗಿ ಬಲ್ಲನಾತ.
8 ನಾಶಗೊಳಿಸುವನು ನಿನೆವೆಯನು ಮಹಾಜಲ
ಪ್ರಳಯದಲ್ಲೋ ಎಂಬಂತೆ
ಹಿಂದಟ್ಟಿ ತಳ್ಳುವನು ವಿರೋಧಿಗಳನು
ಗಾಢಾಂಧಕಾರಕ್ಕೋ ಎಂಬಂತೆ.
9 ಸರ್ವೇಶ್ವರನ ವಿರುದ್ಧ ಮಾಡಬಲ್ಲಿರಾ ನೀವು
ಕುಯುಕ್ತಿ?
ಮರಳಿ ತಲೆಯೆತ್ತದಂತೆ ನಾಶಮಾಡುವನು
ನಿಮ್ಮನು ಪೂರ್ತಿಯಾಗಿ.
10 ಆತನ ವೈರಿಗಳು ಹೆಣೆದುಕೊಂಡಿದ್ದರೂ
ಮುಳ್ಳುಗಳಂತೆ
ಕುಡಿದು ಮತ್ತರಾಗಿ ಮುಳುಗಿದ್ದರೂ
ಮದ್ಯದಲ್ಲೆ
ತುತ್ತಾಗುವರು ಬೆಂಕಿಗೆ ತೀರ ಒಣಗಿದ
ಕೂಳೆಯಂತೆ.

11 ನಿನೆವೆಯೇ, ಸರ್ವೇಶ್ವರಸ್ವಾಮಿಗೆ ವಿರುದ್ಧವಾಗಿ ಕುಯುಕ್ತಿಯನ್ನು ಕಲ್ಪಿಸುವವನು ನಿನ್ನಿಂದಲೆ ಹೊರಟಿದ್ದಾನೆ.

12 ಆ ಸ್ವಾಮಿ ಇಂತೆನ್ನುತ್ತಾರೆ: "ನಿನ್ನ ಶತ್ರುಗಳು ಎಷ್ಟು ಬಲಾಢ್ಯರಾಗಿದ್ದರೂ ಎಷ್ಟು ಅಧಿಕ
ಸಂಖ್ಯೆಯಲ್ಲಿದ್ದರೂ ಅವರು ನಾಶಕ್ಕೊಳಗಾಗುವರು; ಆ ದುರಾಲೋಚಕನು ಇಲ್ಲವಾಗುವನು. ನನ್ನ ಜನರೇ,
ನಾನು ನಿಮ್ಮನ್ನು ಬಾಧಿಸಿದ್ದುಂಟು, ಆದರೆ ಇನ್ನು ಮುಂದೆ ಬಾಧಿಸುವುದಿಲ್ಲ. 13ಆ ಶತ್ರು ನಿಮ್ಮ ಮೇಲೆ
ಹೇರಿದ ನೊಗವನ್ನು ಈಗ ನಿಮ್ಮಿಂದ ತೆಗೆದು ಮುರಿದುಬಿಡುವೆನು. ನಿಮ್ಮ ಸಂಕೋಲೆಗಳನ್ನು
ಕಿತ್ತುಹಾಕುವೆನು."

14 "ಅಸ್ಸೀರಿಯವೇ, ಸರ್ವೇಶ್ವರನಾದ ನಾನು ನಿನ್ನ ಬಗ್ಗೆ ಹೊರಡಿಸಿದ ಆಜ್ಞೆ ಏನೆಂದರೆ: ಹೆಸರೆತ್ತಲು ನಿನಗೆ ಸಂತಾನವೇ ಇಲ್ಲದಂತಾಗುವುದು. ನಿನ್ನ ದೇವರುಗಳ ಗುಡಿಗಳಲ್ಲಿರುವ ಕೆತ್ತನೆಯ ವಿಗ್ರಹವನ್ನೂ ಎರಕದ ಬೊಂಬೆಯನ್ನೂ ಒಡೆದುಹಾಕುವೆನು. ನಿನಗೆ ಸಮಾಧಿಯೊಂದನ್ನು ಸಿದ್ಧಗೊಳಿಸುವೆನು; ಏಕೆಂದರೆ ನೀನು ಕೆಡುಕ."

15 ಇಗೋ, ಶುಭಸಂದೇಶವನ್ನು ಸಾರಲು ದೂತನೊಬ್ಬನು ಪರ್ವತದಿಂದ ಇಳಿದು ಬರುತ್ತಿದ್ದಾನೆ! ಶಾಂತಿ ಸಮಾಧಾನವನ್ನು ಘೋಷಿಸಲು ತ್ವರೆಪಡುತ್ತಿದ್ದಾನೆ! ಜುದೇಯ ನಾಡೇ, ನಿನ್ನ ಹಬ್ಬಗಳನ್ನು ಆಚರಿಸು. ನಿನ್ನ ಹರಕೆಗಳನ್ನು ಸಲ್ಲಿಸು. ಆ ದುಷ್ಟ ಶತ್ರು ಇನ್ನೆಂದಿಗೂ ನಿನಗೆ ಮುತ್ತಿಗೆ ಹಾಕಲಾರನು. ಅವನು ಸಂಪೂರ್ಣವಾಗಿ ನಾಶವಾಗಿದ್ದಾನೆ!

## ನಿನೆವೆಯ ಪತನ

**2** ನಿನೆವೆಯೇ,

ನಿನಗೆದುರಾಗಿ ನಿಂತಿಹನು, ನಿನ್ನನ್ನು
ಚದುರಿಸುವವನು !
ಕಾವಲಿಡು ಕೋಟೆಯ ಸುತ್ತಲು, ಪಹರೆಯಿಡು
ದಾರಿ ಕಾಯಲು;
ಅಣಿಯಾಗಲಿ ನಿನ್ನ ಸೈನ್ಯವಿಡೀ, ನಡುಕಟ್ಟಿ
ನಿಲ್ಲು.

2 (ಸರ್ವೇಶ್ವರ, ಕೊಳ್ಳೆಗಾರರು ಸುಲಿಗೆ ಮಾಡಿದ್ದನ್ನೂ ಮುರಿದುಹಾಕಿದ ದ್ರಾಕ್ಷಿಯ ತೋಟಗಳನ್ನೂ ಸರಿಪಡಿಸಲಿದ್ದಾರೆ. ಯಕೋಬಿನ ಮಹತ್ವವನ್ನು ಹಾಗೂ ಇಸ್ರಯೇಲಿನ ಮಹಿಮೆಯನ್ನು ಈಗ ಮತ್ತೆ ಸ್ಥಾಪಿಸಲಿದ್ದಾರೆ).

3 ಶತ್ರುವಿನ ಶೂರರ ಗುರಾಣಿ ರಕ್ತಗೆಂಪು,
ಪರಾಕ್ರಮಿಗಳ ಉಡುಪು ಕಡುಗೆಂಪು.
ರಣರಂಗದೊಳು ಥಳಥಳಿಸುತ್ತವೆ ರಥಗಳು
ಝಳಪಿಸುತ್ತವೆ ಈಟಿಗಳು.
ಕಾಳಗಕ್ಕೆ ಕಾತರದಿಂದಿವೆ ಕುದುರೆಗಳು.
4 ಹಾದಿಬೀದಿಗಳಲಿ ಓಡಾಡುತ್ತಿವೆ ರಥಗಳು
ರಭಸದಿಂದ
ನಗರ ಚೌಕಗಳಲ್ಲಿ ಅವು ಅಡ್ಡಾಡುತ್ತವೆ
ವೇಗದಿಂದ
ಅವು ಬೆಳಗುತ್ತಿವೆ ಪಂಜುಗಳಂತೆ,
ಹೊಳೆಯುತ್ತಿವೆ ಮಿಂಚಿನಂತೆ.
5 ಹಾಜರಾಗಲು ಕರೆಬಂದಿದೆ ಅರಸನಿಂದ
ಸೇನಾಪತಿಗಳಿಗೆ;
ಎದ್ದುಬಿದ್ದು ಓಡಾಡುತ್ತಿರೆ ಅವರು
ಪೌಳಿಗೋಡೆ ಕಡೆಗೆ
ಅಡ್ಡ ಗುರಾಣಿಗಳನೊಡ್ಡುತ್ತಿರೆ ಟಗರು
ದಿಮ್ಮಿಗಳಿಗೆ.
6 ತೆರೆಯಲಾಗಿವೆ ನದಿಯ ದ್ವಾರಗಳು
ಕುಸಿದುಬಿದ್ದಿವೆ ಅರಮನೆಯ ಗೋಡೆಗಳು.
7 ಸೆರೆಹಿಡಿದಿರುವರು ರಾಣಿಯನು; ತಂದಿಹರು
ಆಕೆಯನು ಬೈಲಿಗೆ.
ದಾಸಿಯರು ಬಡಿದುಕೊಳ್ಳುತಿಹರು ಎದೆ;
ರೋದಿಸುತಿಹರು ಪಾರಿವಾಳಗಳಂತೆ.
8 ನಿನೆವೆ ಕಟ್ಟೆಯೊಡೆದ ಕೆರೆಯಂತಿದೆ;
“ನಿಲ್ಲಿರಿ! ನಿಲ್ಲಿರಿ!” ಎಂಬ ಕೂರು
ಕೇಳುತ್ತಿದೆ;
ಆದರೂ ಓಡುತಿಹರು ಜನರೆಲ್ಲರು ಹಿಂದೆ
ನೋಡದೆ.

9 ಸೂರೆ ಮಾಡಿರಿ ಅದರ ಬೆಳ್ಳಿಯನು,
ಕೊಳ್ಳೆಹೊಡೆಯಿರಿ ಬಂಗಾರವನು.
ಮಿತಿಯಿಲ್ಲ ಅದರ ಧನಕನಕಕೆ,
ಎಲ್ಲೆಯಿಲ್ಲ ಅದರ ಅಮೂಲ್ಯ ಆಸ್ತಿಪಾಸ್ತಿಗೆ.
10 ನಿನೆವೆ ಬರಿದಾಗಿದೆ; ಬಟ್ಟಬರಿದಾಗಿ ಪಾಳು
ಬಿದ್ದಿದೆ;
ಎದೆಕರಗಿದೆ, ಮೊಣಕಾಲುಗಳು ಅದರುತ್ತಿವೆ.
ಎಲ್ಲರ ಸೊಂಟಗಳು ಮುರಿದಂತಾಗಿವೆ, ಅವರ
ಮುಖಗಳು ಬಾಡಿಹೋಗಿವೆ.
11 ಮೃಗರಾಜನ ಗವಿಯೆಲ್ಲಿ? ಯುವಸಿಂಹಗಳ
ಹಕ್ಕೆಯೆಲ್ಲಿ?
ಸಿಂಹ ಸಿಂಹಿಣಿಗಳು, ಅವುಗಳ ಮರಿಗಳು
ಹೆದರದೆ
ತಿರುಗಾಡುತ್ತಿದ್ದ ಎಡೆಯೆಲ್ಲಿ?
12 ಅಲ್ಲಿ ಸಿಂಹ ಬೇಟೆಯನ್ನು ಸೀಳಿಹಾಕುತ್ತಿತ್ತು
ತನ್ನ ಮರಿಗಳಿಗಾಗಿ;
ಕೊರಳುಹಿಡಿದು ಪ್ರಾಣಿಗಳನ್ನು ಹೊಸಕುತ್ತಿತ್ತು
ಸಿಂಹಿಣಿಗಳಿಗಾಗಿ;
ಗವಿಗಳನ್ನು ಬೇಟೆಯಿಂದ, ಹಕ್ಕೆಗಳನ್ನು
ಮಾಂಸದಿಂದ ತುಂಬಿಸುತ್ತಿತ್ತು
ಅವುಗಳಿಗಾಗಿ.
13 ಇಂತೆನ್ನುತ್ತಾರೆ ಸರ್ವಶಕ್ತ ಸರ್ವೇಶ್ವರ:
"ನಿನಗೆ ವಿರುದ್ಧವಾಗಿದ್ದೇನೆ ನಾನು;
ಸುಟ್ಟು ಭಸ್ಮಮಾಡುವೆ ನಿನ್ನ ರಥಗಳನು;
ಸಂಹರಿಸಿಬಿಡುವೆನು ನಿನ್ನ ಯುವಸಿಂಹಗಳನು;
ನಿನಗೆ ಜಗದಲ್ಲೆಲ್ಲ ಬೇಟೆ ಸಿಗದಂತೆ
ಮಾಡುವೆನು;
ಯಾರೂ ಕೇಳರು ನಿನ್ನ ರಾಯಭಾರಿಗಳ
ಮಾತನು."

## ನಿನೆವೆಗೆ ಕೇಡು

**3** ಧಿಕ್ಕಾರ ರಕ್ತಮಯವಾದ ನಗರಕೆ!
ತುಂಬಿದೆ ಅದರಲಿ ಸುಳ್ಳು ಮತ್ತು ಸುಲಿಗೆ
ನಿಲ್ಲದೆ ನಡೆಯುತ್ತಿದೆ ಅದರಲಿ ಕೊಳ್ಳೆ.
2 ಕೇಳಿ, ಚಕ್ರಗಳ ಚೀತ್ಕಾರ, ಚಾಟಿಗಳ ಚಟಪಟ;
ಕುದುರೆಗಳ ಭರದೌಡು, ರಥಗಳ ಹಾರಾಟ.
3 ರಾಹುತರ ರಭಸ, ಕತ್ತಿಯ ಥಳಥಳಿಪು,
ಈಟಿಯ ಝಳಿಪು;
ಹತರಾದವರು ಅಗಣಿತ; ಸತ್ತವರು

ಅಸಂಖ್ಯಾತ,
ಶವಗಳ ರಾಶಿ ವಿಪರೀತ;
ನುಗ್ಗುವವರು ಎಡವುತಿಹರು ಹೆಣಗಳನು
ದಾಟಿಹೋಗುತ.
4 ಇದೆಲ್ಲ ಆಗುವುದು ಅಮಿತ ಹಾದರದ ನಿಮಿತ್ತ
ರಾಷ್ಟ್ರಗಳನು ತನ್ನ ಬೆಡಗು ಬಿನ್ನಾಣಗಳಿಂದ
ಜಾರತನಕ್ಕೂ ಗುಲಾಮತನಕ್ಕೂ ಆಕೆ
ತಂದುದರಿಂದ.
5 ಇಂತೆನ್ನುತ್ತಾರೆ ಸರ್ವಶಕ್ತ ಸರ್ವೇಶ್ವರ:
"ನಿನೆವೆ, ನಿನಗೆ ನಾ ವಿರೋಧಿಯಾಗಿರುವೆನು
ಬಿಚ್ಚಿ ಮುಖದ ಮೇಲೆತ್ತುವೆನು ನಿನ್ನ
ನರಿಗೆಗಳನು
ಜನಾಂಗಗಳಿಗೆ ತೋರಿಸುವೆನು ನಿನ್ನ
ಬೆತ್ತಲೆತನವನು
ರಾಜ್ಯಗಳಿಗೆ ಕಾಣಿಸುವೆನು ನಿನ್ನ
ಅವಮಾನವನು.
6 ಎಸೆಯುವೆನು ನಿನ್ನ ಮೇಲೆ ಹೊಲಸನು
ಕಳೆಯುವೆನು ನಿನ್ನ ಮಾನವನು
ಪರಿಹಾಸ್ಯಕ್ಕೀಡುಮಾಡುವೆನು ನಿನ್ನನು.
7 ನಿನ್ನ ನೋಡುವವರು ನಿನ್ನಿಂದ ದೂರ ಓಡುವರು
"ನಿನೆವೆ ಹಾಳುಬಿದ್ದಿದೆ, ಅದಕ್ಕೆ
ಗೋಳಿಡುವರಾರು?
ಅದನ್ನು ಸಂತೈಸುವವರು ನಮಗೆಲ್ಲಿ
ಸಿಕ್ಕಿಯಾರು?,
ಎಂದುಕೊಳ್ಳುವರು."

8 "ನೀನು ತೇಬೆಸ್ಸಿಗಿಂತ ಸುಭದ್ರಳೋ? ಅದು ನೈಲಿನ ಪ್ರವಾಹಗಳಲ್ಲಿ ನೆಲೆಯಾಗಿತ್ತು. ನೀರು
ಅದನ್ನು ಸುತ್ತಿಕೊಂಡಿತ್ತು. ಮಹಾನದಿ ಅದಕ್ಕೆ ಕೋಟೆಯಾಗಿತ್ತು. ಜಲಾಶಯವು ಅದರ ದುರ್ಗವಾಗಿತ್ತು.
9ಸುಡಾನ್ ಮತ್ತು ಈಜಿಪ್ಟ್ ಅದಕ್ಕೆ ಬೆಂಬಲವಾಗಿದ್ದವು. ಪೂಟ್ ಮತ್ತು ಲಿಬ್ಯ ಅದಕ್ಕೆ
ಮಿತ್ರನಾಡುಗಳಾಗಿದ್ದವು. 10ಆದರೂ ತೇಬೆಸ್ ನಗರವು ಗಡೀಪಾರಾಗಿ ಸೆರೆಹೋಯಿತು. ಅದರ ಮಕ್ಕಳನ್ನು
ಬೀದಿಬೀದಿಯ ಮೂಲೆಗಳಲ್ಲಿ ಬಂಡೆಗಳಿಗೆ ಅಪ್ಪಳಿಸಲಾಯಿತು. ಅದರ ಪ್ರಮುಖರನ್ನು ಬಂಧಿಸಿ
ಕೊಂಡೊಯ್ದು, ಚೀಟುಹಾಕಿ ಹಂಚಿಕೊಳ್ಳಲಾಯಿತು.

11 "ನಿನೆವೆಯೇ, ನೀನು ಸಹ ಮತ್ತಳಾಗಿ ತತ್ತರಿಸುವೆ. ಶತ್ರುಗಳಿಂದ ಆಶ್ರಯ ಕೋರುವೆ. 12ನಿನ್ನ
ಕೋಟೆಗಳೆಲ್ಲ ಮೊತ್ತಮೊದಲು ಮಾಗಿದ ಹಣ್ಣುಗಳುಳ್ಳ ಅಂಜೂರದ ಮರಗಳಂತಿವೆ. ಆ ಮರಗಳನ್ನು
ಅಲ್ಲಾಡಿಸಿದ್ದೇ ಆದರೆ ಹಣ್ಣುಗಳು ಬೀಳುವುವು ತಿನ್ನುವವರ ಬಾಯಿಗೆ. 13ನಿನ್ನ ಯೋಧರನ್ನು ನೋಡು;
ಅವರೆಲ್ಲ ಹೆಣ್ಣಿಗರು. ನಿನ್ನ ದೇಶದ ದ್ವಾರಗಳು ಶತ್ರುಗಳಿಗೆ ತೆರೆದ ಬಾಗಿಲುಗಳು. ಅದರ ಕಬ್ಬಿಣದ ಅಗುಳಿಗಳು
ಬೆಂಕಿಯಿಂದ ಭಸ್ಮವಾದವು. 14ಮುತ್ತಿಗೆಯ ಕಾಲಕ್ಕೆ ನೀರನ್ನು ಸೇದಿ ಶೇಖರಿಸಿಡು. ನಿನ್ನ ಕೋಟೆಯನ್ನು
ಭದ್ರಪಡಿಸು. ಮಣ್ಣಿಗೆ ಇಳಿ; ಜೇಡಿಯನ್ನು ತುಳಿ; ಇಟ್ಟಿಗೆಯ ಅಚ್ಚನ್ನು ಹಿಡಿ. 15ನೀನು ಇದ್ದಲ್ಲಿಯೇ ಬೆಂಕಿ
ನಿನ್ನನ್ನು ಕಬಳಿಸುವುದು. ಕತ್ತಿಯು ನಿನ್ನನ್ನು ಕಡಿದು ಬಿಡುವುದು. ಮಿಡತೆಗಳು ಬೆಳೆಯನ್ನು ನುಂಗುವಂತೆ
ಶತ್ರುಗಳು ನಿನ್ನನ್ನು ನುಂಗಿ ಬಿಡುವರು.

“ನಿನ್ನ ಜನರು ಮಿಡತೆಗಳಂತೆ ಅಸಂಖ್ಯಾತರಾಗಲಿ! ಗುಂಪುಮಿಡತೆಗಳಂತೆ ಅಪರಿಮಿತರಾಗಲಿ!
16ನಿನ್ನ ವರ್ತಕರು ಆಕಾಶದ ನಕ್ಷತ್ರಗಳಿಗಿಂತ ಅಧಿಕವಾಗಲಿ! ಆದರೆ ಈಗ ಮಿಡತೆ ತನ್ನ ಪರೆಯನ್ನು ಬಿಟ್ಟು
ಹಾರಿಹೋಗುವಂತೆ ಎಲ್ಲರು ಪಲಾಯನವಾಗಲಿ! 17ನಿನ್ನ ಪಹರೆಯವರು ಮಿಡತೆಗಳಂತೆ, ನಿನ್ನ
ಸೇನಾಧಿಪತಿಗಳು ಗುಂಪು ಮಿಡತೆಗಳಂತೆ ಇದ್ದಾರೆ. ಚಳಿಗಾಲದಲ್ಲಿ ಅವು ಬೇಲಿಯ ಮರೆಯಲ್ಲಿರುತ್ತವೆ.
ಹೊತ್ತು ಹುಟ್ಟಿದಾಗ ಯಾರಿಗೂ ತಿಳಿಯದ ಸ್ಥಳಕ್ಕೆ ಹಾರಿ ಹೋಗುತ್ತವೆ.

18 “ಅಸ್ಸೀರಿಯಾದ ಅರಸನೇ, ನಿನ್ನ ರಾಜ್ಯಪಾಲರು ದೀರ್ಘನಿದ್ರೆಯಲ್ಲಿದ್ದಾರೆ. ನಿನ್ನ ಪ್ರಮುಖರು
ಜಡವಾಗಿ ಬಿದ್ದಿದ್ದಾರೆ. ನಿನ್ನ ಪ್ರಜೆಗಳು ಬೆಟ್ಟಗುಡ್ಡಗಳಲ್ಲಿ ಚದರಿಹೋಗಿದ್ದಾರೆ. ಅವರನ್ನು
ಒಟ್ಟುಗೂಡಿಸತಕ್ಕವರು ಯಾರೂ ಇಲ್ಲದಿದ್ದಾರೆ. 19ನಿನ್ನ ಗಾಯಕ್ಕೆ ಮದ್ದಿಲ್ಲ. ನಿನಗೆ ಬಿದ್ದಿರುವ ಪೆಟ್ಟು
ಪ್ರಾಣನಾಶಕ. ನಿನ್ನ ವಿನಾಶದ ಸಮಾಚಾರವನ್ನು ಕೇಳುವರೆಲ್ಲ ಚಪ್ಪಾಳೆ ಹಾಕುತ್ತಾರೆ. ಏಕೆಂದರೆ ನೀನು
ಮಾಡಿರುವ ಕೇಡಿಗೆ ಕೊನೆಯಿಲ್ಲ. ಅದರಿಂದ ತಪ್ಪಿಸಿಕೊಂಡವರು ಯಾರೂ ಇಲ್ಲ.”